ದೂರವಾಣಿ ಸಂಖ್ಯೆ: 2419277/2419210
ಫ್ಯಾಕ್ಸ್: 0821-3419363/24193011

e-mail registrar@Uni-mysore-ac-in
www.uni-mysore-ac-in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ: ಯುಎ-1/174/2023-24

ದಿನಾಂಕ 04-11-2023

**"ಪ್ರಮಾಣಿತ ಅಂಚೆ ಮೂಲಕ"**

ಶಿಕ್ಷಣ ಮಂಡಳಿ ಸದಸ್ಯರುಗಳಿಗೆ,

ಮಾನ್ಯರೆ,

ವಿಷಯ: ದಿನಾಂಕ: 18-10-2023ರಂದು ನಡೆದ ಶಿಕ್ಷಣ ಮಂಡಳಿಯ ವಿಶೇಷ ಸಭೆಯ ನಡವಳಿಯನ್ನು ಕಳುಹಿಸುವ ಬಗ್ಗೆ.

* * * * *

ವಿಶ್ವವಿದ್ಯಾನಿಲಯದ 103ನೇ ವಾರ್ಷಿಕ ಘಟಿಕೋತ್ಸವದ ಪೂರ್ವಾಭಾವಿಯಾಗಿ, ದಿನಾಂಕ 18-10-2023 ರಂದು ಬೆಳಗ್ಗೆ 8-30 ಗಂಟೆಗೆ, ಕ್ರಾಫರ್ಡ್ ಭವನದ ಶಿಕ್ಷಣ ಮಂಡಳಿ ಸಭಾಂಗಣದಲ್ಲಿ ನಡೆದ, ಶಿಕ್ಷಣ ಮಂಡಳಿ ವಿಶೇಷ ಸಭೆಯ ನಡವಳಿಗಳ ಪ್ರತಿಯನ್ನು ತಮ್ಮ ಮಾಹಿತಿಗಾಗಿ ಈ ಮೂಲಕ ಕಳುಹಿಸಿಕೊಡಲಾಗಿದೆ, ನಡವಳಿಯಲ್ಲಿ ದಾಖಲಿಸಿರುವ ಯಾವುದೇ ಅಂಶದ ಯಥಾರ್ಥತೆಯ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಂದ ನಡವಳಿಯ ಬಗ್ಗೆ ನಿಮ್ಮ ಆಕ್ಷೇಪಣೆ(ಗಳು) ಏನಾದರೂ ಇದ್ದಲಿ "ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಕ್ರಾಫರ್ಡ್ ಭವನ, ಮೈಸೂರು" ಇವರನ್ನು ಉದ್ದೇಶಿಸಿ ಬರೆದ ಪತ್ರವನ್ನು ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಕ್ರಾಫರ್ಡ್ ಭವನ, ಮೈಸೂರು-570005 ಇವರಿಗೆ ನೇರವಾಗಿ ತಲುಪಿಸುವಂತೆ ಕೋರಲಾಗಿದೆ. ಸದರಿ ನಡವಳಿಗಳಿಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ, ನಡವಳಿಯಲ್ಲಿ ದಾಖಲಿಸಿರುವ ಎಲ್ಲಾ ಅಂಶಗಳು ಸರಿಯಾಗಿವೆ ಎಂದು ಪರಿಗಣಿಸಲ್ಪಡುತ್ತವೆ,

ತಮ್ಮ ನಂಬುಗೆಯ

Lingaraju 04/11/23

ಉಪ ಕುಲಸಚಿವ(ಪ್ರಾಧಿಕಾರ)
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು.

ಪ್ರತಿ:

1. ಗೌರವಾನ್ವಿತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು - ಘನತೆವೆತ್ತ ರಾಜ್ಯಪಾಲರ ಅವಗಹಾನೆಗೆ ತರಬೇಕಾಗಿ ಕೋರಲಾಗಿದೆ.
2. ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ವಿಶ್ವವಿದ್ಯಾನಿಲಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ನಿರ್ದೇಶಕರು, ಪಿ.ಎಂ.ಇ.ಬಿ/ ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ವಿದ್ಯಾರ್ಥಿಕ್ಷೇಮಪಾಲನ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು.
6. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು(ಶೈಕ್ಷಣಿಕ/ಆಡಳಿತ/ಅಭಿವೃದ್ಧಿ/ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿಶೇಷ ಘಟಕ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಕಛೇರಿ ಪ್ರತಿ.

AC Forwarding letter

# ಮೈಸೂರು ವಿಶ್ವವಿದ್ಯಾನಿಲಯ

ಮೈಸೂರು ವಿಶ್ವವಿದ್ಯಾನಿಲಯದ ಕ್ರಾಫರ್ಡ್ ಭವನದ ಶಿಕ್ಷಣ ಮಂಡಳ ಸಭಾಂಗಣದಲ್ಲಿ ವಿಶ್ವವಿದ್ಯಾನಿಲಯದ 103ನೇ ವಾರ್ಷಿಕಘಟಿಕೋತ್ಸವದ ಪೂರ್ವಭಾವಿಯಾಗಿ ದಿನಾಂಕ: 18-10-2023ರಂದು ಬೆಳಗ್ಗೆ 8.30 ಗಂಟೆಗೆ ಜರುಗಿದ ಶಿಕ್ಷಣ ಮಂಡಳ ವಿಶೇಷ ಸಭೆಯ ನಡವಳಗಳು

<u>ಸಭೆಗೆ ಹಾಜರಾಗಿದ್ದ ಸದಸ್ಯರುಗಳು</u>

1. ಪ್ರೊ. ಎನ್.ಕೆ.ಲೋಕನಾಥ್, ಕುಲಪತಿಗಳು – ಅಧ್ಯಕ್ಷರು
2. ಪ್ರೊ. ಎ.ಎಚ್.ಎಂ. ವಿಜಯಲಕ್ಷ್ಮಿ – ಸದಸ್ಯರು
   ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ
   ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ
   ಪ್ರಾದೇಶಿಕ ಕಛೇರಿ, ಮೈಸೂರು.
3. ಡಾ. ಜಯಶಂಕರ್. ಎನ್ – ಸದಸ್ಯರು
4. ಶ್ರೀಮತಿ ಸೌಮ್ಯ ಈರಪ್ಪ ಕೆ. – ಸದಸ್ಯರು
5. ಪ್ರೊ. ಟಿ.ಆರ್. ಮಾರುತಿ – ಸದಸ್ಯರು
6. ಪ್ರೊ. ಎಸ್. ಮದಿಅಳಗನ್ – ಸದಸ್ಯರು
7. ಪ್ರೊ. ಬಿ. ಮಹಾದೇವಪ್ಪ – ಸದಸ್ಯರು
8. ಪ್ರೊ. ಡಿ. ಸೋನರ್ ನಂದಪ್ಪ – ಸದಸ್ಯರು
9. ಪ್ರೊ. ಎಂ.ಜಿ. ಮಂಜುನಾಥ್ – ಸದಸ್ಯರು
10. ಪ್ರೊ. ನಾಗರಾಜ ನಾಯ್ಕ್ – ಸದಸ್ಯರು
11. ಪ್ರೊ. ಡಿ. ಆನಂದ್, ನಿರ್ದೇಶಕರು (ಪ್ರಭಾರ) – ಸದಸ್ಯರು
    ಕಾಲೇಜು ಅಭಿವೃದ್ಧಿ ಮಂಡಳ
12. ಡಾ. ಪಿ. ಸರಸ್ವತಿ, ಗ್ರಂಥಪಾಲಕರು – ಸದಸ್ಯರು
    ಮಾನಸಗಂಗೋತ್ರಿ, ಮೈಸೂರು – ಸದಸ್ಯರು
13. ಡಾ. ಚಂದ್ರಶೇಖರ್, ನಿರ್ದೇಶಕರು (ಪ್ರಭಾರ) – ಸದಸ್ಯರು
    ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ
14. ಪ್ರೊ. ಬಿ. ನಾಗರಾಜು, ನಿರ್ದೇಶಕರು, ಪಿ.ಎಂ.ಇ.ಬಿ – ಸದಸ್ಯರು
15. ಡಾ. ಸಿ. ವೆಂಕಟೇಶ್, ನಿರ್ದೇಶಕರು (ಪ್ರಭಾರ)
    ದೈಹಿಕ ಶಿಕ್ಷಣ ವಿಭಾಗ – ಸದಸ್ಯರು
16. ಪ್ರೊ. ಕೆ.ಎಂ. ಮಹದೇವನ್, ಕುಲಸಚಿವ (ಪರೀಕ್ಷಾಂಗ) – ಸದಸ್ಯರು
17. ಶ್ರೀಮತಿ ರೇಖಾ.ಕೆ.ಎಸ್., ಕೆ.ಎಸ್.ಎ.ಎಸ್ – ಸದಸ್ಯರು
    ಹಣಕಾಸು ಅಧಿಕಾರಿ
18. ಕುಮಾರಿ ಅನುಷಾ .ಪಿ.ಜಿ – ಸದಸ್ಯರು
19. ಕುಮಾರಿ ಮುಸ್ಕನ್ ಭಾನು – ಸದಸ್ಯರು
20. ಶ್ರೀ ರೋಹನ್.ವಿ – ಸದಸ್ಯರು
21. ಶ್ರೀ ಉದಯ್.ಎಂ.ಎಲ್ – ಸದಸ್ಯರು
22. ಶ್ರೀಮತಿ ವಿ.ಆರ್. ಶೈಲಜ, ಕೆ..ಎ.ಎಸ್, ಕುಲಸಚಿವರು ಹಾಗೂ ಸದಸ್ಯ ಕಾರ್ಯದರ್ಶಿ

<u>ಸಭೆಯಲ್ಲಿ ಗೈರು ಹಾಜರಾಗಿದ್ದವರು</u>

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು.
2. ಶ್ರೀ ಸಿ.ಎನ್. ಮಂಜೇಗೌಡ ಎಂ.ಎಲ್.ಸಿ
3. ಶ್ರೀ ಎಂ.ಪಿ. ಕುಶಾಲಪ್ಪ, ಎಂ.ಎಲ್.ಸಿ
4. ಶ್ರೀ ಎಸ್.ಎಚ್. ಗಂಗೇಗೌಡ

5. ಪ್ರೊ. ಎಂ.ಎ. ಶ್ರೀಧರ್
6. ಪ್ರೊ. ಆಯಿಷಾ ಎಂ. ಶರೀಫ್
7. ಕುಮಾರಿ ಅನು .ಎಸ್.ಜೆ.
8. ಶ್ರೀ ಎಂ ಪವನ್‌ಕುಮಾರ್

ಮೊದಲಿಗೆ ಕುಲಸಚಿವರು ಶಿಕ್ಷಣ ಮಂಡಳ ವಿಶೇಷ ಸಭೆಗೆ ಆಗಮಿಸಿದ್ದ ಎಲ್ಲಾ ಸದಸ್ಯರುಗಳನ್ನು ಸ್ವಾಗತಿಸಿದರು.

ನಂತರ ಮಾನ್ಯ ಕುಲಪತಿಗಳು ಚರಿತ್ರಾರ್ಹವಾದ ಮೈಸೂರು ವಿಶ್ವವಿದ್ಯಾನಿಲಯದ 103ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಾಕ್ಟೊರೇಟ್ ಪದವಿಯನ್ನು ಮತ್ತು ವಿವಿಧ ಕೋರ್ಸುಗಳ ಪದವಿಗಳನ್ನು ಪ್ರದಾನಿಸುವ ಸಲುವಾಗಿ ವಿಶ್ವವಿದ್ಯಾನಿಲಯದ ಎಲ್ಲಾ ನಿಕಾಯಗಳ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ ವಿಶೇಷ ಶಿಕ್ಷಣ ಮಂಡಳ ಸಭೆಯ ಅನುಮೋದನೆಗಾಗಿ ಮಂಡಿಸಲಾಗಿದೆ ಎಂದು ತಿಳಿಸಿದರು.

| | |
|---|---|
| ವಿಷಯ ಸಂಖ್ಯೆ: 1.1 | 103ನೇ ವಾರ್ಷಿಕ ಘಟಿಕೋತ್ಸವದ ಅಭ್ಯರ್ಥಿಗಳ ಪಟ್ಟಿಯನ್ನು ಅನುಮೋದಿಸುವ ಬಗ್ಗೆ. |
| ತೀರ್ಮಾನ | 103ನೇ ವಾರ್ಷಿಕ ಘಟಿಕೋತ್ಸವದಲ್ಲಿ ವಿವಿಧ ಪದವಿಗಳನ್ನು ಪ್ರದಾನಿಸುವ ಸಲುವಾಗಿ ಮಂಡಿಸಿರುವ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಶಿಕ್ಷಣ ಮಂಡಳ ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| ವಿಷಯ ಸಂಖ್ಯೆ: 1.2 | 103ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಾಕ್ಟೊರೇಟ್ ಪದವಿ ಪ್ರದಾನ ಮಾಡುವ ಬಗ್ಗೆ. |
| ತೀರ್ಮಾನ | ಕುಲಾಧಿಪತಿಗಳ ಕಾರ್ಯದರ್ಶಿಯವರ ದಿನಾಂಕ: 15.05.2023ರ ಅದೇಶದನ್ವಯ 103ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದ್ಮಭೂಷಣ ನಾಡೋಜ ಡಾ. ಪಿ.ಎಸ್. ಶಂಕರ್, ವಿಶ್ರಾಂತ ವೈದ್ಯಕೀಯ ಪ್ರಾಧ್ಯಾಪಕರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು, ಶ್ರೀ ಕೆ.ಬಿ. ಗಣಪತಿ, ಪ್ರಧಾನ ಸಂಪಾದಕರು, ಮೈಸೂರು ಮಿತ್ರ ಮತ್ತು ಸ್ಟಾರ್ ಆಫ್ ಮೈಸೂರು ದಿನಪತ್ರಿಕೆ, ಮೈಸೂರು ಮತ್ತು ಶ್ರೀ ಜಾವಗಲ್ ಶ್ರೀನಾಥ್, ವಿಶ್ರಾಂತ ಅಂತಾರಾಷ್ಟ್ರೀಯ ಕ್ರಿಕೆಟ್ ಆಟಗಾರರು ಮತ್ತು ಐಸಿಸಿ ಕ್ರಿಕೆಟ್ ಪಂದ್ಯಗಳ ತೀರ್ಪುಗಾರರು ಇವರುಗಳಿಗೆ ಗೌರವ ಡಾಕ್ಟೊರೇಟ್ (D.Sc. ಮತ್ತು D.Litt.,) ಪದವಿ ಪ್ರದಾನ ಮಾಡಲು ಕುಲಾಧಿಪತಿಗಳು ಅನುಮೋದಿಸಿರುವುದನ್ನು ಶಿಕ್ಷಣ ಮಂಡಳ ಸಭೆಯು ಅನುಸಮರ್ಥಿಸಿತು. |

ಅಂತಿಮವಾಗಿ, ಅಧ್ಯಕ್ಷರು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಸದಸ್ಯರುಗಳಿಗು ವಂದಿಸಿ, 103ನೇ ವಾರ್ಷಿಕ ಘಟಿಕೋತ್ಸವದ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಲು ಎಲ್ಲಾ ಸದಸ್ಯರುಗಳು ಸಹಕರಿಸಬೇಕೆಂದು ಕೋರುತ್ತಾ, ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/-
ಕುಲಸಚಿವ ಹಾಗೂ ಸದಸ್ಯ ಕಾರ್ಯದರ್ಶಿ

ಸಹಿ/-
ಕುಲಪತಿ ಹಾಗೂ ಅಧ್ಯಕ್ಷರು